ಕರ್ನಾಟಕ ಸರ್ಕಾರ
ಆಯುಕ್ತರ ಕಾರ್ಯಾಲಯ,
ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ,
4ನೇ ಮಹಡಿ, ಶ್ರೀ ಮಿಂಟೋ ಆಂಜನೇಯ ಸ್ವಾಮಿ ಭವನ, ಆಲೂರು ವೆಂಕಟರಾವ್ ರಸ್ತೆ,
ಚಾಮರಾಜಪೇಟೆ, ಬೆಂಗಳೂರು-18.ದೂರವಾಣಿ: 26709689/ 26706775
E-mail: endowmentcommissioner@gmail.com

---

ಸಂಖ್ಯೆ: HRICE-ADM0ADM8/305/2023/E-1275976 ದಿನಾಂಕ:-05.08.2026.

## -: ಪ್ರಕಟಣೆ :-

ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ಕೊಕ್ಕಡ ಶ್ರೀ ವೈದ್ಯನಾಥೇಶ್ವರ ದೇವಾಲಯಕ್ಕೆ ಈ ಕಛೇರಿ ಆದೇಶ ಸಂಖ್ಯೆ: HRICE-ADM0ADM8/305/2023/ಇ-1275976 ದಿನಾಂಕ:13.03.2024ರಲ್ಲಿ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಕಾಯ್ದೆ 2011ರ ಸೆಕ್ಷನ್ 25ರ ಅನ್ವಯ ಮೂರು (3) ವರ್ಷಗಳ ಅವಧಿಗೆ ಕೆಲವು ಷರತ್ತಿಗೊಳಪಡಿಸಿ ವ್ಯವಸ್ಥಾಪನಾ ಸಮಿತಿಯನ್ನು ರಚಿಸಲಾಗಿರುತ್ತದೆ. ಕಾರಣಾಂತರಗಳಿಂದ ದಿನಾಂಕ:15.03.2026 ರಂದು ಸದರಿ ದೇವಾಲಯಕ್ಕೆ ವ್ಯವಸ್ಥಾಪನ ಸಮಿತಿಯನ್ನು ರಚಿಸಲಾಗಿದ್ದ ಆದೇಶವನ್ನು ತಾತ್ಕಾಲಿಕವಾಗಿ ತಡೆಹಿಡಿದು ಆದೇಶಿಸಲಾಗಿರುತ್ತದೆ.

ದಿನಾಂಕ:05.01.2026 ರಂದು ನಡೆದ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆಯ ನಡವಳಿಗಳ ವಿಷಯಸೂಚಿ ಸಂಖ್ಯೆ:10ರ ನಿರ್ಣಯದಂತೆ ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ಕೊಕ್ಕಡ ಶ್ರೀ ವೈದ್ಯನಾಥೇಶ್ವರ ದೇವಾಲಯಕ್ಕೆ 9 ಜನ ಮಹನೀಯರು / ಮಹಿಳೆಯರನ್ನು ಒಳಗೊಂಡ ವ್ಯವಸ್ಥಾಪನ ಸಮಿತಿಯನ್ನು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ಕಾಯ್ದೆ 2011ರ ಸೆಕ್ಷನ್ 25ರ ಅನ್ವಯ ಮೂರು (3) ವರ್ಷಗಳ ಅವಧಿಗೆ ಹೊಸದಾಗಿ ರಚಿಸಲು ಸದಸ್ಯತ್ವ ಬಯಸುವ ಆಸಕ್ತ ಭಕ್ತಾಧಿಗಳು /ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಿ, ಪ್ರಕಟಣೆ ಹೊರಡಿಸಿದೆ.

| ಕ್ರ. ಸಂ | ದೇವಾಲಯದ ಹೆಸರು ಮತ್ತು ವಿಳಾಸ |
|---|---|
| 1. | ಕೊಕ್ಕಡ, ಶ್ರೀ ವೈದ್ಯನಾಥೇಶ್ವರ ದೇವಾಲಯ<br>ಬೆಳ್ತಂಗಡಿ ತಾಲ್ಲೂಕು. ದಕ್ಷಿಣ ಕನ್ನಡ ಜಿಲ್ಲೆ, |

ಸದರಿ ದೇವಾಲಯದ ವ್ಯವಸ್ಥಾಪನಾ ಸಮಿತಿಗೆ ಕನಿಷ್ಟ 25 ವರ್ಷಕ್ಕಿಂತ ಮೇಲ್ಪಟ್ಟ ಆಸ್ತಿಕ ಭಕ್ತಾಧಿಗಳು ಸದಸ್ಯತ್ವ ಕೋರಿ, ಅರ್ಜಿಯನ್ನು ನಿಗಧಿತ ನಮೂನೆ-1(ಬಿ)(22ನೇ ನಿಯಮ) ನಮೂನೆಯಲ್ಲಿ ಭರ್ತಿ ಮಾಡಿ, ಅರ್ಜಿಯನ್ನು ದಿನಾಂಕ:27.08.2026.ರೊಳಗಾಗಿ **"ಆಯುಕ್ತರು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ, ಮಿಂಟೋ ಶ್ರೀ ಆಂಜನೇಯ ಭವನ, ಆಲೂರು ವೆಂಕಟರಾವ್ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560018"** ಇಲ್ಲಿಗೆ ನೇರವಾಗಿ ಸಲ್ಲಿಸತಕ್ಕದ್ದು, ಅಂತಹ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.

Scanned with OKEN Scanner

ನಿಗಧಿತ ಅವಧಿಯ ನಂತರದಲ್ಲಿ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. (ನಿಗಧಿತ ಅರ್ಜಿ ನಮೂನೆಯು ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಮತ್ತು www.itms.kar.gov.in ನಲ್ಲಿ ಲಭ್ಯವಿರುತ್ತದೆ.)

**(ಕ.ಟಿ.ಆ.ಮೇ.)**

ಉಪ ಆಯುಕ್ತರು-01
ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು

**ಪ್ರತಿಯನ್ನು:**

1. ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
2. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
3. ಸ್ವಾಯಿಕಡತ.
4. ಹೆಚ್ಚುವರಿ.

Scanned with OKEN Scanner